## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯದಲ್ಲಿರುವ ಸಿಖ್ ಸಮುದಾಯದ ಗುರುದ್ವಾರಗಳ ನವೀಕರಣ/ ದುರಸ್ಥಿ/ ಜೀರ್ಣೋದ್ಧಾರಕ್ಕಾಗಿ ಸಹಾಯಾನುದಾನ ಬಿಡುಗಡೆ ಮಾಡುವ ಬಗ್ಗೆ

**ಉಲ್ಲೇಖ:** 3. 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ:220 (6)

4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರ ಪ್ರಸ್ತಾವನೆ ಸಂಖ್ಯೆ: ಅಸಂನಿ/ಸಿಆರ್-483/2016-17, ದಿನಾಂಕ:31.03.2017

-*~*~*~*~*

**ಪ್ರಸ್ತಾವನೆ:-**

ಸನ್ಮಾನ್ಯ ಮುಖ್ಯಮಂತ್ರಿಯವರು ಮೇಲೆ (1)ರಲ್ಲಿ ಓದಲದ 2017-18ನೇ ಸಾಲಿನ ಆಯವ್ಯಯ ಭಾಷಣದ **ಕಂಡಿಕೆ: 220-(6)**ರಲ್ಲಿ ಈ ಕೆಳಕಂಡಂತೆ ಘೋಷಿಸಿರುತ್ತಾರೆ.

**"ಸಿಖ್ ಸಮುದಾಯದ ಗುರುದ್ವಾರಗಳ ಜೀರ್ಣೋದ್ಧಾರಕ್ಕಾಗಿ ತಲಾ ರೂ. 10 ಲಕ್ಷ ಸಹಾಯಧನ ಒದಗಿಸಲಾಗುವುದು."**

ಕರ್ನಾಟಕ ರಾಜ್ಯದಲ್ಲಿರುವ ಸಿಖ್ ಸಮುದಾಯದ ಗುರುದ್ವಾರಗಳ ನವೀಕರಣ/ದುರಸ್ಥಿ/ಜೀರ್ಣೋಧ್ದಾರಕ್ಕಾಗಿ ಸಹಾಯಾನುದಾನ ಬಿಡುಗಡೆ ಮಾಡುವ ಬಗ್ಗೆ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಮೇಲೆ (2)ರಲ್ಲಿ ಓದಲಾದ ಏಕಕಡತ ಪದ್ಧತಿಯನ್ವಯ ಪ್ರಸ್ತಾವನೆಯನ್ನು ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಅದರಂತೆ, ಸಿಖ್ ಸಮುದಾಯದ ಗುರುದ್ವಾರ ನವೀಕರಣ/ ದುರಸ್ಥಿ/ ಜೀರ್ಣೋಧ್ದಾರಕ್ಕಾಗಿ ಅನುದಾನ ಬಿಡುಗಡೆ ಮಾಡಲು ಪ್ರತ್ಯೇಕ ಮಾರ್ಗಸೂಚಿಗಳು ರಚಿಸುವುದು ಅಗತ್ಯ ಮತ್ತು ಅಪೇಕ್ಷಣೀಯವಾಗಿರುವುದರಿಂದ, ಸದರಿ ಪ್ರಸ್ತಾವನೆಯನ್ನು ಕುಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಅದೇಶ ಸಂಖ್ಯೆ: MWD 207 MDS 2017,

## ದಿನಾಂಕ: 29.05.2017

ಸನ್ಮಾನ್ಯ ಮುಖ್ಯಮಂತ್ರಿಯವರ 2017-18ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ: 220-(6)ರಲ್ಲಿನ ಘೋಷಣೆಯಂತೆ ಕರ್ನಾಟಕ ರಾಜ್ಯದಲ್ಲಿರುವ ಸಿಖ್ ಸಮುದಾಯದ ಗುರುದ್ವಾರಗಳ ದುರಸ್ತಿ/ ಜೀರ್ಣೋದ್ಧಾರ/ ನವೀಕರಣಕ್ಕಾಗಿ ಸಹಾಯಾನುದಾನವನ್ನು ನೀಡಲು

.........2

2017-18ನೇ ಸಾಲಿನಿಂದ ಜಾರಿಗೆ ಬರುವಂತೆ ಈ ಆದೇಶದ **"ಅನುಬಂಧ"** ದಲ್ಲಿ ಲಗತ್ತಿಸಿರುವ ಮಾರ್ಗಸೂಚಿಗಳೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರದ ಮಂಜೂರಾತಿಯನ್ನು ನೀಡಿ ಆದೇಶಿಸಲಾಗಿದೆ.

ಈ ಮಾರ್ಗಸೂಚಿಗಳು ತಕ್ಷಣದಿಂದ ಜಾರಿಗೆ ಬರುತ್ತವೆ. ಈ ಯೋಜನೆಗೆ ತಗಲುವ ವೆಚ್ಚವನ್ನು 2017-18ನೇ ಸಾಲಿನ **ಜೈನ್ ಸಮುದಾಯದ ಅಭಿವೃದ್ಧಿ ಯೋಜನೆಯ** ಲೆಕ್ಕಶೀರ್ಷಿಕೆ:2225-03-277-2-82ರಡಿ ಒದಗಿಸಿರುವ ಅನುದಾನದ ಮಿತಿಯಲ್ಲಿಯೇ ಭರಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 234 ವೆಚ್ಚ-3/ 2017, ದಿನಾಂಕ:25-04-2017 ಮತ್ತು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: ಪಿಡಿ 58 ಐಎಂಎಂ 2017, ದಿನಾಂಕ:28-04-2017 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

**ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ**
**ಮತ್ತು ಇವರ ಹೆಸರಿನಲ್ಲಿ**

ಎಂ. ನಾಗರತ್ನ 27/5/17
(ಎಂ ನಾಗರತ್ನ)
**ಸರ್ಕಾರದ ಜಂಟಿ ಕಾರ್ಯದರ್ಶಿ**
**ಅಲ್ಪಸಂಖ್ಯಾತರ ಕಲ್ಯಾಣ ಹಜ್**
**ಮತ್ತು ವಕ್ಫ್ ಇಲಾಖೆ**

**ಪ್ರತಿ:**

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳುರು.
2. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
3 ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರ ಆಪ್ತ ಕಾರ್ಯದರ್ಶಿಗಳು, ಬೆಂಗಳುರು.
4. ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ, 20ನೇ ಮಹಡಿ, ವಿ.ವಿ.ಗೋಪುರ, ಬೆಂಗಳುರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು.
6. ಎಲ್ಲಾ ಜಿಲ್ಲೆಯ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್. } ನಿರ್ದೇಶಕರವರ ಮುಖಾಂತರ
7. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ ಇಲಾಖೆ, ವಿ.ವಿ.ಗೋಪುರ, ಡಾ॥ ಅಂಬೇಡ್ಕರ್ ರಸ್ತೆ, ಬೆಂಗಳುರು.
8. ನಿರ್ದೇಶಕರು, ಯೋಜನಾ ಇಲಾಖೆ ಪಿಎಂಐ ವಿಭಾಗ ಬಹುಮಹಡಿ ಕಟ್ಟಡ ಬೆಂಗಳುರು.
9. ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ (ನಿರ್ದೇಶಕರ ಮುಖಾಂತರ).
10. ಸರ್ಕಾರದ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು
11. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-3), ವಿಧಾನ ಸೌಧ, ಬೆಂಗಳುರು.
12 ಸರ್ಕಾರದ ಅಧೀನ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಬೆಂಗಳೂರು.
13 ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

......3